c) Lower strata families will not be denied quality education under RTE quota, because those who have no access to internet are allowed to apply offline.

d) Yes

ಕನ್ನಡ ಭಾಷೆಯ ಸಂಶೋಧನೆ

1389(436); ಶ್ರೀ ಕೆ. ಗೋಪಾಲಯ್ಯ (ಮಹಾಲಕ್ಷ್ಮೀ ಲೇಔಟ್)

ಅ) ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನದ ಅನುಷ್ಠಾನಕ್ಕಾಗಿ ಹಾಗೂ ಕನ್ನಡ ಭಾಷೆಯಲ್ಲಿ ಸಂಶೋಧನೆ ಹಾಗೂ ಇತರೆ ಚಟುವಟಿಕೆಗಳಿಗಾಗಿ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ನೆರವನ್ನು ಕೋರಿದೆಯೇ?

ಆ) ಹಾಗಿದ್ದಲ್ಲಿ, ಎಷ್ಟು ಹಣವನ್ನು ಕೋರಲಾಗಿದೆ?

ಇ) 2008 ರಲ್ಲಿಯೇ ಕೇಂದ್ರ ಸರ್ಕಾರ ಕನ್ನಡಕ್ಕೆ ಶಾಸ್ತ್ರೀಯ ಭಾಷೆ ಸ್ಥಾನಮಾನ ನೀಡಿದ್ದರೂ, ಇಲ್ಲಿಯವರೆಗೆ ಕೇಂದ್ರ ಸರ್ಕಾರದಿಂದ ನೆರವನ್ನು ಕೋರಿರುವುದಿಲ್ಲವೇ?

ಈ) ಕೋರಿದ್ದರೆ, 2008 ರಿಂದ ಎಷ್ಟು ಹಣ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿದೆ?

ಶ್ರೀಮತಿ ಉಮಾಶ್ರೀ (ಮಹಿಳಾ ಕನ್ನಡ ಮತ್ತು ಮಕ್ಕಳ ಅಬಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಹೌದು.

ಆ) ಕನ್ನಡ ಶಾಸ್ತ್ರೀಯ ಭಾಷಾ ಅಧ್ಯಯನ ಕೇಂದ್ರದ ಕಟ್ಟಡ ನಿರ್ಮಾಣಕ್ಕಾಗಿ ₹ 15.00 ಕೋಟಿ ಹಾಗೂ ಅಧ್ಯಯನ ಕೇಂದ್ರದ ಮೂಲಕ ಕನ್ನಡ ಭಾಷೆಯ ಅಭಿವೃದ್ಧಿಗೆ ವಿವಿಧ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲು ₹ 25.00 ಕೋಟಿ ಒಟ್ಟು ₹ 40.00 ಕೋಟಿ ಅನುದಾನ ನೀಡುವಂತೆ

ಮಾನ್ಯ ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವರನ್ನು ಕೋರಿರುತ್ತಾರೆ.

ಇ) 2008 ರಲ್ಲಿ ಕನ್ನಡ ಭಾಷೆಗೆ ಶಾಸ್ತ್ರೀಯ ಭಾಷೆ ಸ್ಥಾನಮಾನ ನೀಡಿದರೂ 2011 ರಲ್ಲಿ ಮೈಸೂರಿನ ಭಾರತೀಯ ಭಾಷಾ ಸಂಸ್ಥಾನದ ಅಧೀನದಲ್ಲಿ ಕನ್ನಡ ಶಾಸ್ತ್ರೀಯ ಭಾಷಾ ಉನ್ನತ ಅಧ್ಯಯನ ಕೇಂದ್ರವನ್ನು ಪ್ರಾರಂಭಿಸಲಾಗಿದೆ. ಹಿಂದಿನ ಸರ್ಕಾರಗಳ ಅವಧಿಯಲ್ಲಿ ಈ ಕೆಳಕಂಡ ಮೂರು ಅಂಶಗಳ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

1) ಯೋಜನೆ ಮತ್ತು ಮೇಲ್ವಿಚಾರಣಾ ಮಂಡಳಿಯ ಸ್ಥಾಪನೆ.

2) ಹಣಕಾಸು ಸ್ಥಾಯಿ ಸಮಿತಿಯ ಸ್ಥಾಪನೆ.

3) ಕನ್ನಡ ಶಾಸ್ತ್ರೀಯ ಭಾಷಾ ಉನ್ನತ ಅಧ್ಯಯನ ಕೇಂದ್ರದ ಸ್ಥಾಪನೆ.

ಈ) 2011–12 ರಿಂದ 2014–15ನೇ ಸಾಲಿನವರೆಗೂ ಮೈಸೂರಿನ ಕನ್ನಡ ಶಾಸ್ತ್ರೀಯ ಭಾಷಾ ಅಧ್ಯಯನ ಕೇಂದ್ರಕ್ಕೆ ಮಂಜೂರಾಗಿರುವ ಅನುದಾನದ ವಿವರಗಳು ಈ ಕೆಳಕಂಡಂತಿವೆ.

Financial year	Amount allocated	Amount spent	Balance
2011-12	54,54,000	45,33,133	9,20,867
2012-13	2,18,00,000	22,43,208	1,95,56,792
2013-14	2,18,00,000	4,25,000	2,13,75,000
2014-15	1,00,00,000	-	-
Total	**5,90,54,000**	**72.01,341**	**4,18,52,659**